ದಿನಾಂಕ: 25.11.2022ರಂದು ಬೆಳ್ಳಿಗ್ಗೆ 10.30 ಗಂಟೆಗೆ ಶಿವನಗರ ವಾರ್ಡ್ ನಂ.143 [107] ರಲ್ಲಿ ನೋಡಲ್ ಅಧಿಕಾರಿಯವರಾದ ಶ್ರೀ ಲಿಂಗಣ್ಣ ಗುಂಡಳ್ಳಿ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರವನ್ನು ದಿನಾಂಕ: 26.11.2022ರಂದು ಸಲ್ಲಿಸುವ ಕುರಿತು.

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ಶಿವಕುಮಾರಯ್ಯ, ಹಿ.ಆ.ಪ
3. ಶ್ರೀ ಅನಿಕೇಶ್, ಕಿ.ಆ.ಪ
4. ಶ್ರೀ ರವಿ.ಸಿ.
5. ಶ್ರೀ ದರ್ಶನ್

ಶ್ರೀ ಪೂಜಾರಪ್ಪ, ಸಹಾಯಕ ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 143ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು, ವಾರ್ಡಿನಲ್ಲಿ ಒಣಗಿರುವ ಮತ್ತು ಕಡಿದಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸುವಂತೆ ಸೂಚಿಸಿದರು. ಸಭೆಯಲಿದ್ದ ಸದಸ್ಯರು ಹಾಗೂ ನೋಡಲ್ ಅಧಿಕಾರಿಗಳು ರಸ್ತೆಯಲ್ಲಿ ಬಿದ್ದಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ವಿಳಂಭ ಮಾಡುತ್ತಿರುವ ಬಗ್ಗೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರಿಗೆ ಅರಣ್ಯ ಇಲಾಖೆ ಅಧಿಕಾರಿಗಳಿಂದ ಕೆಲಸ ಪ್ರಗತಿಯಲ್ಲಿದ್ದು, ಇತ್ತೀಚಿನ ದಿನಗಳಲ್ಲಿ ಬಿದ್ದ ಭಾರಿ ಮಳೆಗಳಿಂದ ರಸ್ತೆಯ ಇಕ್ಕೆಲಗಳಲ್ಲಿ ಮರದ ಕೊಂಬೆಗಳು ಬಿದ್ದಿರುವುದನ್ನು ತುರ್ತಾಗಿ ಬೇರೆಡೆಗೆ ಸಾಗಿಸಲು ಕ್ರಮ ವಹಿಸಲಾಗಿರುತ್ತದೆ ಎಂದು ಸಭೆಗೆ ಮಾಹಿತಿಯನ್ನು ಸಲ್ಲಿಸಿರುತ್ತಾರೆ. ಅದರಂತೆ ತಿಮ್ಮಯ್ಯ ರಸ್ತೆ ಮತ್ತು ಮಂಜುನಾಥನಗರ ಮುಖ್ಯ ರಸ್ತೆಗಳಲ್ಲಿ ಕೆಲವು ಮರಗಳ ಕೊಂಬೆಗಳು ಒಣಗಿದ್ದು, ಮುಂಜಾಗ್ರತ ಕ್ರಮವಾಗಿ ಒಣಗಿರುವ ಮರದ ಕೊಂಬೆಗಳನ್ನು ತುರ್ತಾಗಿ ತೆರವು ಮಾಡಲು ಸಾರ್ವಜನಿಕರು ಮತ್ತು ಸದಸ್ಯರು ಸಭೆಯಲ್ಲಿ ಕೋರಿರುತ್ತಾರೆ. ಅದರಂತೆ ಹಂತ ಹಂತವಾಗಿ ತೆರವುಗೊಳಿಸಿ ಮುಂದಿನ ಸಭೆಗೆ ವರದಿ ಮಾಡುತ್ತೇನೆ ಎಂದು ಅರಣ್ಯಾಧಿಕಾರಿಗಳು ಸಭೆಗೆ ತಿಳಿಸಿರುತ್ತಾರೆ.

2. ಸದರಿ ವಾರ್ಡ್ ಪ್ರದೇಶದಲ್ಲಿ ಈಗಾಗಲೇ ಗುಂಡಿಗಳನ್ನು ಮುಚ್ಚಲಾಗಿದ್ದು, ಇನ್ನುಳಿದ ಗುಂಡಿಗಳನ್ನು ಈಗಾಗಲೇ ದಿನಿನಿತ್ಯ ಜಲ್ಲಿ ಕಲ್ಲಿನ ಮಿಶ್ರಣ ಮತ್ತು ಕೆಲವು ಭಾಗಗಳಲ್ಲಿ ಡಾಂಬರ್ ಮಿಶ್ರಣದಿಂದ ಕೆಲವು ರಸ್ತೆ ಗುಂಡಿಗಳನ್ನು ಸಾರ್ವಜನಿಕರ ದೂರಿನ ಮೇರೆಗೆ ಹಾಗೂ ಸಂಚಾರಿ ಪೋಲಿಸ್ ರವರು ನಮೂದಿಸಿರುವ ಗುಂಡಿಗಳನ್ನು ಹಂತ ಹಂತವಾಗಿ ನಿರ್ವಹಿಸಲಾಗಿರುತ್ತದೆ.

3. ಪ್ರಸ್ತುತ ಸಾಲಿನಲ್ಲಿ ವಾರ್ಡ್ ನಂ. 143 ವಾರ್ಡ್ ವ್ಯಾಪ್ತಿಯಲ್ಲಿ ಕರ ವಸೂಲಿ 75% ರಿಂದ 80% ರವರೆಗೆ ವಸೂಲಾಗಿದ್ದು, ಇನ್ನುಳಿದಂತಹ ಶೇ. ಕರವಸೂಲಿಯನ್ನು ಪ್ರಸ್ತುತ ಸಾಲಿನಲ್ಲಿಯೇ ಪೂರ್ಣ ಪ್ರಮಾಣದಲ್ಲಿ ಗುರಿ ತಲುಪಲು ಮುಂಜಾಕ್ರಮ ವಹಿಸುತ್ತೇವೆ ಎಂದು ಸಭೆಗೆ ಕಂದಾಯ ಅಧಿಕಾರಿಗಳು ತಿಳಿಸಿರುತ್ತಾರೆ.

25/11/22

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 143

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು

Scanned by CamScanner